RNU AIR DHARWAD

JULY 07, 2025

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

ಬೆಂಗಳೂರು ನಗರದಲ್ಲಿ 130 ಕಿಲೋ ಮೀಟರ್ ವ್ಯಾಪ್ತಿಯಲ್ಲಿ ಮೆಟ್ರೋ ಮೇಲ್ಸೇತುವೆಗಳಿದ್ದು, ನೂತನ ಮೆಟ್ರೋ ಮಾರ್ಗಗಳಿರುವ ಕಡೆಗಳಲ್ಲಿ ಡಬಲ್ ಡೆಕ್ಕರ್ ಗಳ ನಿರ್ಮಾಣ ಮಾಡಲಾಗುವುದು ಎಂದು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಹೇಳಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಈಗಾಗಲೇ 7 ಕಿಲೋ ಮೀಟರ್ ಡಬಲ್ ಡೆಕ್ಕರ್ ಮೆಟ್ರೋ ಮಾರ್ಗ ನಿರ್ಮಾಣ ಮಾಡಲಾಗಿದೆ. ಶೀಘ್ರದಲ್ಲೇ, 37 ಕಿಲೋ ಮೀಟರ್ ಡಬಲ್ ಡೆಕ್ಕರ್ ನಿರ್ಮಾಣಕ್ಕೆ ಗುತ್ತಿಗೆ ಪ್ರಕ್ರಿಯೆ ಅಂತಿಮಗೊಳಿಸಲಾಗುವುದು ಎಂದರು.

<><><>

ಕಾಂಗ್ರೆಸ್ ಸರ್ಕಾರವು ಕುಟುಂಬ ರಾಜಕಾರಣಕ್ಕಾಗಿ, ತುರ್ತು ಪರಿಸ್ಥಿತಿ ಎಂಬ ಕರಾಳ ದಿನಗಳನ್ನು ಜಾರಿಗೊಳಿಸಿ, ಜನರನ್ನು ಕಗ್ಗತ್ತಲಿಗೆ ದೂಡಿತ್ತು ಎಂದು ವಿಧಾನಸಭೆ ವಿರೋಧ ಪಕ್ಷದ, ಉಪ ನಾಯಕ ಅರವಿಂದ ಬೆಲ್ಲದ ಹೇಳಿದ್ದಾರೆ. ಧಾರವಾಡ ಕರ್ನಾಟಕ ವಿದ್ಯಾವರ್ಧಕ ಸಂಘದ. ಪಾಟೀಲ ಪುಟ್ಟಪ್ಪ ಸಭಾಭವನದಲ್ಲಿ, ಹುಬ್ಬಳ್ಳಿ–ಧಾರವಾಡ ಮಹಾನಗರ, ಜಿಲ್ಲಾ ಬಿಜೆಪಿ ವತಿಯಿಂದ ಆಯೋಜಿಸಲಾದ, ಸೇವೆ, ಸುಶಾಸನ, ಬಡವರ ಕಲ್ಯಾಣದ ಪ್ರಧಾನಮಂತ್ರಿ ನರೇಂದ್ರ ಮೋದಿ ಸರ್ಕಾರಕ್ಕೆ 11 ವರ್ಷ, ವಿಕಸಿತ ಭಾರತ ಅಭಿಯಾನ ಸಭೆ ಮತ್ತು ತುರ್ತು ಪರಿಸ್ಥಿತಿ ಕರಾಳ ದಿನಗಳ ಹೋರಾಟದ, 50 ನೇ ವ ರ್ಷ ಅನಾವರಣ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಅವರು ಮಾತನಾಡಿದರು.

<><><>

ಧ್ವನಿ: ಅರವಿಂದ ಬೆಲ್ಲದ 39 ಸೆಕೆಂದುಗಳು

<><><>

ವಿಕಸಿತ ಭಾರತ ಅಭಿಯಾನ ಸಭೆಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ತುರ್ತು ಪರಿಸ್ಥಿತಿ ಸಂದರ್ಭ ಹೋರಾಟ ನಡೆಸಿ, ಜೈಲುವಾಸ ಅನುಭವಿಸಿದ ಒಟ್ಟು ಏಳು ಜನ ಹಿರಿಯ ಸಾಮಾಜಿಕ ಕಾರ್ಯಕರ್ತರನ್ನು ಸನ್ಮಾನಿಸಿ, ಗೌರವಿಸಲಾಯಿತು.

<><><>

ವಿಶೇಷಚೇತನರು, ಸರ್ಕಾರ ನೀಡುವ ಸೌಲಭ್ಯಗಳನ್ನು ಪಡೆದು ಉತ್ತಮ ರಾಷ್ಟ್ರ ನಿರ್ಮಾಣಕ್ಕೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದ್ದಾರೆ. ಉತ್ತರಕನ್ನಡ ಜಿಲ್ಲೆಯ ಶಿರಸಿಯಲ್ಲಿ

ಆಯೋಜಿಸಿದ್ದ ರಾಷ್ಟ್ರೀಯ ವಯೋಶ್ರೀ ಯೋಜನೆಯ ಫಲಾನುಭವಿಗಳಿಗೆ ವಿವಿಧ ಸಾಧನಗಳನ್ನು ವಿತರಿಸಿ ಅವರು ಮಾತನಾಡಿದರು.

<><><>

ವಿಜಯನಗರ ಜಿಲ್ಲೆ, ಹರಪನಹಳ್ಳಿಯಲ್ಲಿ ವಿಧಾನ ಪರಿಷತ್ ಸಭಾಪತಿ ಅವರಿಗೆ ಎಂ.ಪಿ ಪ್ರಕಾಶ ಸಂಸದೀಯ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಮಾಜಿ ಕೇಂದ್ರ ಸಚಿವ ಹಾಗೂ ಮಾಜಿ ಮುಖ್ಯಮಂತ್ರಿ ಸದಾನಂದ ಗೌಡ ಅವರು ಪ್ರಶಸ್ತಿ ಪ್ರದಾನಿಸಿ ಗೌರವಿಸಿದರು.

<><><>

ರಾಜ್ಯದ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬಗಳಿಗೆ ನಗದು ರಹಿತ ಆರೋಗ್ಯ ಸೇವೆ ಕಲ್ಪಿಸುವ ಜ್ಯೋತಿ ಸಂಜೀವಿನಿ ಯೋಜನೆಯು ಮುಂದಿನ ತಿಂಗಳು ಜಾರಿಗೆ ಬರಲಿದೆ ಎಂದು ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್ ಷಡಕ್ಷರಿ ದಾವಣಗೆರೆಯಲ್ಲಿ ತಿಳಿಸಿದ್ದಾರೆ.

<><><>

ಗದಗ ಜಿಲ್ಲೆಯ ರಾಷ್ಟ್ರೀಯ ಆರೋಗ್ಯ ಅಭಿಯಾನದ ಆಶ್ರಯದಲ್ಲಿ 'ಅನೀಮಿಯಾ ಮುಕ್ತ ಪೌಷ್ಟಿಕ ರಾಜ್ಯ' ಕಾರ್ಯಕ್ರಮ ಗದಗ ನಗರದ ಸರಕಾರಿ ಪ್ರೌಢ ಶಾಲೆಯಲ್ಲಿ ಜರುಗಿತು.

<><><>

ಬಾಗಲಕೋಟೆ ಕರ್ನಾಟಕ ಬಯಲಾಟ ಅಕಾದೆಮಿ ಹಾಗೂ ಧಾರವಾಡ ಕನಾಟಕ ವಿದ್ಯಾವರ್ಧಕ ಸಂಘದ ಸಹಯೋಗದಲ್ಲಿ ನಾಳೆ ಬೆಳಗ್ಗೆ 10.30 ಕ್ಕೆ 'ಬಯಲಾಟ ಹೊಸ ಸಾಧ್ಯತೆಗಳು ಎಂಬ ವಿಚಾರ ಸಂಕಿರಣ ಹಾಗೂ ಪ್ರದರ್ಶನ ನಡೆಯಲಿದೆ ಎಂದು ಎಂದು ಕರ್ನಾಟಕ ಬಯಲಾಟ ಅಕಾದೆಮಿ ಅಧ್ಯಕ್ಷ ಕೆ.ಎಸ್ ದುರ್ಗಾದಾಸ್ ತಿಳಿಸಿದ್ದಾರೆ.

<><><>

ಧಾರವಾಡ ನಗರ ಸೇರಿದಂತೆ ನಾಡಿನ ವಿವಿಧೆಡೆಗಳಲ್ಲಿ ಮೊಹರಂ ಹಬ್ಬವನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು. ನಗರದ ವಿವಿಧ ಮಸೀದಿಗಳಲ್ಲಿ ಭಕ್ತರು ಪ್ರಾರ್ಥನೆ ಸಲ್ಲಿಸಿದರು, ಹಲವೆಡೆಗಳಲ್ಲಿ ಪಾಂಜಾಗಳನ್ನು ಸ್ಥಾಪನೆ ಮಾಡಿ, ಪೂಜೆ ಸಲ್ಲಿಸಿ ಮೆರವಣಿಗೆ ಮಾಡಲಾಯಿತು.

<><><>

ಆಷಾಢ ಏಕಾದಶಿ ದಿನದಂದು, ಕಾಶಿ ಜ್ಞಾನ ಪೀಠದ ಜಗದ್ಗುರು ಶ್ರೀ ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರು, ಪಂಢರಪುರದ ಶ್ರೀ ವಿಠಲ ರುಕ್ಮಿಣಿ ದೇವಾಲಯಕ್ಕೆ ಆಗಮಿಸಿ, ಶ್ರೀ ವಿಠಲ ದೇವರಿಗೆ ಚಿನ್ನದ ಕರಡಗಿಯನ್ನು ಸಮರ್ಪಿಸಿದರು.

<><><>

ದರಕಾಸ್ತು ಪೋಡಿ ಆಂದೋಲನದಲ್ಲಿ ಹಾಸನ ಜಿಲ್ಲೆ ಪ್ರಥಮ ಸ್ಥಾನ ಪಡೆದುಕೊಂಡಿದೆ, ಯಶಸ್ಸಿಗೆ ಶ್ರಮವಹಿಸಿದ ಎಲ್ಲ ಅಧಿಕಾರಿಗಳನ್ನು ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೆ. ಎನ್ ರಾಜಣ್ಣ ಶ್ಲಾಘಿಸಿದ್ದು, ಅಭಿನಂದನೆ ಸಲ್ಲಿಸಿದ್ದಾರೆ.

<><><>

**ಬಿರುಸಿನ ಗಾಳಿ ಸಹಿತ ಮಳೆ ಹಿನ್ನೆಲೆ, ಇಂದು ಕೊಡಗು ಜಿಲ್ಲೆಯ ಅಂಗನವಾಡಿ, ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ಜಿಲ್ಲಾಧಿಕಾರಿ ವೆಂಕಟ ರಾಜಾ ರಜೆ ಘೋಷಿಸಲಾಗಿದೆ.**

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.**

<><><>